# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:125 RNI NO.KAR KAN/2003/10452:No./PMG/KA/NK/BM/743/24-26 ಶುಕ್ರವಾರ ದಿನಾಂಕ: 12-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಮತದಾನ ಹಬ್ಬವನ್ನು ಎಲ್ಲರೂ ಒಟ್ಟಾಗಿ ಆಚರಿಸೋಣ ; ತುಷಾರ್ ಗಿರಿನಾಥ್

ಬೆಂಗಳೂರು,ಏ.11– ಇದೇ 26 ರಂದು ನಡೆಯುಲಿರುವ ಮತದಾನದ ಹಬ್ಬವನ್ನು ಎಲ್ಲರೂ ಸೇರಿ ಒಟ್ಟಾಗಿ ಆಚರಿಸೋಣ ಎಂದು ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಇಂದಿಲ್ಲಿ ಕರೆ ನೀಡಿದರು.

ಲೋಕಸಭಾ ಚುನಾವಣೆಯ ಅಂಗವಾಗಿ ಚುನಾವಣಾ ಆಯೋಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಯೂನಿಯನ್ ಬ್ಯಾಂಕ್ ಸಹಯೋಗದಲ್ಲಿ ವಿಧಾನಸೌಧದ ಮುಂಭಾಗ ಇಂದು ಹಮ್ಮಿಕೊಂಡಿರುವ ಮತದಾನ ಜಾಗೃತಿಯ ಸೈಕಲ್ ಜಾಥಾ(ಸೈಕ್ಲೋಥಾನ್)ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯುಲಿದ್ದು, ದಕ್ಷಿಣ ಕರ್ನಾಟಕದಲ್ಲಿ ಏಪ್ರಿಲ್ 26 ರಂದು ಹಾಗೂ ಉತ್ತರ ಕರ್ನಾಟಕದಲ್ಲಿ ಮೇ 7 ರಂದು ಮತದಾನ ನಡೆಯುತ್ತಿದೆ. ಮತ ಚಲಾಯಿಸಲು ಅರ್ಹರಿರುವ ಎಲ್ಲರೂ ತಪ್ಪದೆ ಮತ ಚಲಾಯಿಸಿ ಎಂದು ಅವರು ಮನವಿ ಮಾಡಿಕೊಂಡರು.

ಲೋಕಸಭಾ ಚುನಾವಣೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮ ಹಾಗೂ ಜಾಥಾಗಳನ್ನು ಹಮ್ಮಿಕೊಳ್ಳುವ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದರು.



ಮತದಾನ ಜಾಗೃತಿಗಾಗಿ ಹಮ್ಮಿಕೊಂಡಿದ್ದ ಸೈಕ್ಲಥಾನ್ ವಿಧಾನ ಸೌಧದ ಗ್ರಾಂಡ್ ಸ್ಟೆಪ್ಸ್ ಮುಂಭಾಗದಿಂದ, ಕೆ.ಆರ್ ವೃತ್ತದ ನೃಪತುಂಗ ರಸ್ತೆಯ ಮೂಲಕ ಸಾಗಿ, ಹಡ್ಸನ್ ವೃತ್ತ, ಕಸ್ತೂರ್ ಬಾ ರಸ್ತೆ, ಕ್ವೀನ್ಸ್ ರಸ್ತೆ(ಚಿನ್ನಸ್ವಾಮಿ ಕ್ರೀಡಾಂಗಣ)ಯಿಂದ, ಡಾ. ಬಿ.ಆರ್ ಅಂಬೇಡ್ಕರ್ ರಸ್ತೆಯ ಮೂಲಕ ವಿಧಾನಸೌಧ ಪೂರ್ವ ದ್ವಾರದ ಬಳಿ ಸೈಕ್ಲೋಥಾನ್ ಮುಕ್ತಾಯಗೊಂಡಿತು.

ಈ ವೇಳೆ ಜಿಲ್ಲಾ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಕಾಂತರಾಜು, ಸ್ವೀಪ್ ನೋಡಲ್ ಅಧಿಕಾರಿಯಾದ ಪ್ರತಿಭಾ, ಚುನಾವಣಾ ರಾಯಭಾರಿಗಳಾದ ಅನುಪ್ ಶ್ರೀಧರ್, ನೀತು ವನಜಾಕ್ಷಿ, ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ನಾಗರೀಕರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಜಿಲ್ಲಾದ್ಯಂತ ಬೆಳಗಾವಿಯಲ್ಲಿ ಸಂಭ್ರಮ ಸಡಗರ ದಿಂದ ರಂಜಾನ ಹಬ್ಬವನ್ನು ಆಚರಣೆ

ಬೆಳಗಾವಿ: ರಂಜಾನ್ ಆಚರಣೆ ಮಾಡಿ ಚಂದ್ರನ ದರ್ಶನದೊಂದಿಗೆ ಒಂದು ತಿಂಗಳಿದ ರಮಜಾನ ಮಾಸ ಆಚರಣೆ ಮುಕ್ತಾಯಗೊಳಿಸಿ, ಇಂದು ಬೆಳಗ್ಗೆ ಅಂಜುಮನ್ ಈದ್ಗಾ ಮೈದಾನ ನಲ್ಲಿ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯಗಳ ವಿನಿಮಯ ಮಾಡಿಕೊಂಡರು.

ಪವಿತ್ರ ಮಾಸ ರಂಜಾನ್ ಹಬ್ಬ ದಿನ ವಿದ್ದು ಹೊಸ ಹೊಸ ಸಮವಸ್ತ್ರ ಬಟ್ಟೆಗಳನ್ನು ಧರಿಸಿ ರಂಜಾನ್ ಹಬ್ಬದ ಶುಭಾಶಯಗಳು ಕೋರಿದರು ಚಿಕ್ಕ ಮಕ್ಕಳಿಂದ ಹಿಡಿದು ವಯಸ್ಕರು, ಮಹಿಳೆಯರು ಸಂಭ್ರಮ ಹಾಗೂ ಉಲ್ಲಾಸದಿಂದ ಹಬ್ಬ ಆಚರಣೆಯಲ್ಲಿ ತೊಡಗಿದರು. ಪ್ರಾರ್ಥನೆಯಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಈ ಹಬ್ಬ ಶಾಂತಿ ಸಂಭ್ರಮ ಮತ್ತು ಸುಖ ನೆಮ್ಮದಿ ಈ ದೇಶದ ಪ್ರತಿಯೊಬ್ಬರಿಗೂ ಭಗವಂತ ಸುಖ ಸಮೃದ್ಧಿ ಆರೋಗ್ಯ ನೀಡಲಿ ಪ್ರಾರ್ಥನೆ ಸಲ್ಲಿಸಿದರು

ಸರ್ವ ಜನಾಂಗದ ಶಾಂತಿಯ ತೋಟ ನಮ್ಮ ದೇಶ ಸದಾಕಾಲ ಅಭಿವೃದ್ಧಿಯೊಂದಿಗೆ ಸಹೋದರ ಭಾವ ಮತ್ತು ಸೌಹಾರ್ದದಿಂದ ಮುಂದೆ ಸಾಗಲಿ ಎಂದು ನಾನು ಆ ಭಗವಂತನಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದರು ಈ ಸಂದರ್ಭದಲ್ಲಿ ಅನೇಕ ಮುಸ್ಲಿಂ ಬಾಂಧವರು ಶಾಸಕರಿಗೆ ಹಬ್ಬದ ಶುಭ ಹಾರೈಸಿದರು.

### ಸಾರ್ವತ್ರಿಕ ಲೋಕಸಭಾ ಚುನಾವಣೆ–2024

## ಏಪ್ರಿಲ್ 12 ರಿಂದ 19 ರವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶ: ನಲಿನ್ ಅತುಲ್

ಕೊಪ್ಪಳ ಏಪ್ರಿಲ್ 11 : ಸಾರ್ವತ್ರಿಕ ಲೋಕಸಭಾ ಚುನಾವಣೆ–2024 ರ ಹಿನ್ನೆಲೆಯಲ್ಲಿ 8–ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ಮೇ 07 ರಂದು ಚುನಾವಣೆ ನಡೆಯಲಿದ್ದು, ಏಪ್ರಿಲ್ 12 ರಿಂದ ಏ.19 ರವರೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.



ಭಾರತ ಚುನಾವಣಾ ಆಯೋಗವು ಈಗಾಗಲೇ 2024ರ ಲೋಕಸಭಾ ಚುನಾವಣಾ ವೇಳಾಪಟ್ಟಿಯನ್ನು ನಗದಿಪಡಿಸಿದ್ದು, ಅದರಂತೆ ಮಾ.16 ರಿಂದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಅಧಿಸೂಚನೆ ಹೊರಡಿಸಿದ ಏ.12 ರಿಂದ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗಲಿದೆ. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾಧಿಕಾರಿಗಳಿಂದ ನಾಮಪತ್ರ ಸ್ವೀಕರಿಸಲಾಗುವುದು. ನಾಮಪತ್ರ ಸಲ್ಲಿಸಲು ಇಚ್ಛಿಸುವವರು ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ ಏ.12 ರಿಂದ ಏ.19 ರವರೆಗೆ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸಲ್ಲಿಸಬಹುದು.

ಏ.20 ರಂದು ಬೆಳಿಗ್ಗೆ 11 ಗಂಟೆಗೆ ನಾಮಪತ್ರಗಳನ್ನು ಪರಿಶೀಲನೆಗೆ ತೆಗೆದುಕೊಳ್ಳಲಾಗುವುದು. ಏ.22 ರ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರವನ್ನು ವಾಪಸ್ ಪಡೆದುಕೊಳ್ಳಲು ಅವಕಾಶವಿದ್ದು, ನಂತರ ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳಿಗೆ ಚುನಾವಣಾ ಚಿಹ್ನೆಯ ಹಂಚಿಕೆ ಕಾರ್ಯವನ್ನು ಕೈಗೊಳ್ಳಲಾಗುವುದು. ಮೇ 7 ರಂದು ಮತದಾನ ಹಾಗೂ ಜೂನ್ 4 ರಂದು ಮತ ಎಣಿಕೆ ನಡೆಯಲಿದೆ.

ನಾಮಪತ್ರ ಸಲ್ಲಿಸಲು ಚುನಾವಣಾಧಿಕಾರಿಗಳ ಕೊಠಡಿಗೆ ಅಭ್ಯರ್ಥಿ ಸೇರಿದಂತೆ ಗರಿಷ್ಠ 5 ಜನರಿಗೆ ಮಾತ್ರ ಪ್ರವೇಶಿಸಲು ಅವಕಾಶವಿರುತ್ತದೆ. ಚುನಾವಣಾಧಿಕಾರಿಗಳ ಕಛೇರಿಯ 100 ಮೀಟರ್ ವ್ಯಾಪ್ತಿಯ ಮುಖ್ಯದ್ವಾರದವರೆಗೆ ಉಮೇದುವಾರಿಕೆಯನ್ನು ಸಲ್ಲಿಸುವ ಅಭ್ಯರ್ಥಿಗೆ ಗರಿಷ್ಠ 3 ವಾಹನಗಳನ್ನು ಬಳಕೆ ಮಾಡಲು ಅವಕಾಶವಿರುತ್ತದೆ.

ಚುನಾವಣಾಧಿಕಾರಿಗಳ ಕಛೇರಿಯ ಆವರಣದಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯ ಮೇರೆಗೆ ಅಭ್ಯರ್ಥಿಗಳ ವಾಹನ ಹಾಗೂ ಅಭ್ಯರ್ಥಿಗಳ ಪ್ರವೇಶಾತಿಯನ್ನು ನಿಯಂತ್ರಿಸಲು ಹಾಗೂ ಜಿಲ್ಲಾಡಳಿತ ಭವನದ ನೌಕರರು/ ಅಧಿಕಾರಿಗಳ ಪ್ರವೇಶಕ್ಕೆ ಮತ್ತು ದೈನಂದಿನ ಕಛೇರಿ ಕೆಲಸಕ್ಕೆ ಆಗಮಿಸುವ ಸಾರ್ವಜನಕರಿಗೆ ಕಛೇರಿ ಪ್ರವೇಶಿಸಲು ಪ್ರತ್ಯೇಕವಾದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

ಚುನಾವಣಾಧಿಕಾರಿಗಳ ಕಛೇರಿಯ ಆವರಣದಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯ ಮೇರೆಗೆ ಅಭ್ಯರ್ಥಿಗಳ ವಾಹನ ಹಾಗೂ ಅಭ್ಯರ್ಥಿಗಳ ಪ್ರವೇಶಾತಿಯನ್ನು ನಿಗಾವಹಿಸಲು ಉಪ ಪೊಲೀಸ್ ಅಧೀಕ್ಷಕರು, ಕೊಪ್ಪಳ ಇವರ ನೇತೃತ್ವದಲ್ಲಿ 2 ವೃತ್ತ ನಿರೀಕ್ಷಕರು, 3 ಸಬ್ ಇನ್ಸೆಕ್ಟರ್‌ಗಳು, 5 ಸಹಾಯಕ ಸಬ್ ಇನ್ಸೆಕ್ಟರ್‌ಗಳು, ಮಹಿಳಾ ಪೊಲೀಸ್ ಹಾಗೂ ಇನ್ನಿತರೆ ಪೊಲೀಸ್ ಕಾನ್‌ಸ್ಟೇಬಲ್‌ಗಳು, ಗೃಹ ರಕ್ಷದ ದಳದ ಸಿಬ್ಬಂದಿಗಳ ಸೇರಿದಂತೆ ಸುಮಾರು 70 ಜನ ಪೊಲೀಸ್ ಅಧಿಕಾರಿ/ ಸಿಬ್ಬಂದಿಗಳನ್ನು ಕಾರ್ಯಕ್ಕೆ ನಿಯೋಜನೆ ಮಾಡಲಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಕ್ಷ್ಮೀ ಹೆಬ್ಬಾಳ್ಕರ್ ಮೀಸಲಾತಿ ಹೋರಾಟದಲ್ಲಿ ಪಾಲ್ಗೊಂಡಿದ್ದರು ಅವರು ನಮ್ಮವರೇ ಎಂದು ನಾವು ಒಪ್ಪಿಕೊಂಡಿದ್ದೇವೆ :ಬಸವಜಯ ಮೃತ್ಯುಂಜಯ ಸ್ವಾಮೀಜಿ

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪಂಚಮಸಾಲಿ ಅಲ್ಲ ಎಂದು ಹೇಳಿದ್ದ ಮಾಜಿ ಸಚಿವ ಮುರುಗೇಶ ನಿರಾಣಿ ಅವರಿಗೆ ಕೂಡಲಸಂಗಮ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ತಿರುಗೇಟು ನೀಡಿದ್ದು, ನಮ್ಮವರು ಎನ್ನುವ ಕಾರಣಕ್ಕೆ ಮೀಸಲಾತಿ ಹೋರಾಟದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಪಾಲ್ಗೊಂಡಿದ್ದರು ಎಂದು ಹೇಳಿದ್ದಾರೆ.

ಬೆಳಗಾವಿಯಲ್ಲಿಂದು ಮಾಧ್ಯಮದವರ ಜತೆ ಮಾತನಾಡಿದ ಶ್ರೀಗಳು, ಲಕ್ಷ್ಮೀ ಹೆಬ್ಬಾಳ್ಕರ್ ಮೀಸಲಾತಿ ಹೋರಾಟದಲ್ಲಿ ಪಾಲ್ಗೊಂಡಿದ್ದರು. ಅವರು ನಮ್ಮವರೇ ಎಂದು ನಾವು ಒಪ್ಪಿಕೊಂಡಿದ್ದೇವೆ. ಯಾರೋ ಒಬ್ಬರು ಏನೇನೋ ಮಾತಾಡ್ತಾರೆ ಅಂತ ನಾನು ಪ್ರತಿಕ್ರಿಯೆ ಕೊಡೋದಿಲ್ಲ. ಈ ಬಗ್ಗೆ ಬೆಳಗಾವಿ ಜಿಲ್ಲಾ ಮುಖಂಡರಿಂದಲೂ ಸ್ಪಷ್ಟನೆ ನೀಡಲಾಗುವುದು. ನಮ್ಮ ಮೀಸಲಾತಿ ಹೋರಾಟದಲ್ಲಿ ಅನೇಕರು ಗುರುತಿಸಿಕೊಂಡಿದ್ದರು. ನಮ್ಮವರು ಎನ್ನುವ ಕಾರಣಕ್ಕೆ ಅವರೆಲ್ಲಾ ನಮಗೆ ಬೆಂಬಲ ಕೊಟ್ಟಿದ್ದಾರೆ. ವಿಷಯಾಂತರ ಮಾಡಿ ಮನಸ್ಸಿಗೆ ನೋವಾಗುವ ಹೇಳಿಕೆ ಯಾರೂ ಕೊಡಬಾರದು ಎಂದರು.

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಬಗ್ಗೆ ನಾನು ಏನೂ ಹೇಳಲ್ಲ. ಲಕ್ಷ್ಮೀ ಹೋರಾಟಕ್ಕೆ ಧುಮುಕಿದ್ದಾರೆ ಎನ್ನುವ ಕಾರಣಕ್ಕೆ ಅವರ ಮೇಲೆ ಅಭಿಮಾನ, ಗೌರವ ಇದೆ. ಹೋರಾಟದಲ್ಲಿ ಪಾಲ್ಗೊಂಡವರ ಬಗ್ಗೆ ಎಂದಿಗೂ ಒಳ್ಳೆಯ ಅಭಿಮಾನ ಇರುತ್ತದೆ. ಟೀಕೆ, ಟಿಪ್ಪಣಿ ಮಾಡಿದವರ ವಿರುದ್ಧ ಜಿಲ್ಲಾ ಘಟಕ ಪ್ರತಿಕ್ರಿಯೆ ಕೊಡಲಿದೆ ಎಂದು ಹೇಳಿದರು.

ಲಕ್ಷ್ಮೀ ಹೆಬ್ಬಾಳ್ಕರ್ ಪಂಚಮಸಾಲಿ ಹೌದೋ ಅಲ್ಲವೋ ಎನ್ನುವ ಗೊಂದಲ ವಿಚಾರಕ್ಕೆ, ಅದು ಇಡೀ ಜಗತ್ತಿಗೆ ಗೊತ್ತಿದೆ. ಮೀಸಲಾತಿ ಹೋರಾಟದಲ್ಲಿ ಮುಂಚೂಣಿಯಲ್ಲಿ ಪಾಲ್ಗೊಂಡವರು ನಮ್ಮವರು. ಮತ್ತೆ ಅವರ ಜಾತಿ ಬಗ್ಗೆ ಯಾಕೆ ಕೆದಕೋದು ಎಂದು ತಿಳಿಸಿದರು.

6ನೇ ಹಂತದ ಹೋರಾಟ: ಪಂಚಮಸಾಲಿ ಸಮಾಜಕ್ಕೆ ನ್ಯಾಯ ಸಿಕ್ಕಿಲ್ಲ ಎನ್ನುವ ಕೊರಗಿದೆ. ಕಳೆದ ಎಂಟು ತಿಂಗಳಿಂದ 6ನೇ ಹಂತದ ಹೋರಾಟ ಮಾಡಿದ್ದೇವೆ. ಚುನಾವಣೆ ಬಳಿಕ ಮತ್ತೆ ಮೀಸಲಾತಿ ಹೋರಾಟದ ಬಗ್ಗೆ ಚರ್ಚೆ ನಡೆದಿದೆ. ಯಾವ ರೀತಿ ಸರ್ಕಾರದ ಮೇಲೆ ಒತ್ತಡ ತರಬೇಕು ಎನ್ನುವ ಬಗ್ಗೆ ಚರ್ಚೆ ಮಾಡುತ್ತೇವೆ. ಬೆಳಗಾವಿಯಲ್ಲಿ ಕೇಂದ್ರ ಕಚೇರಿ ಆರಂಭಿಸುತ್ತೇವೆ ಎಂದರು.

## ಮುಸ್ಲಿಂ ಬಾಂಧವರಿಗೆ ಮುರ್ಮು,ಮೋದಿ ಶುಭಾಶಯ

ನವದೆಹಲಿ,ಏ.11– ಈದ್–ಉಲ್–ಫಿತರ್ ಸಂದರ್ಭದಲ್ಲಿ ದೇಶದ ಜನರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಮುಸ್ಲಿಂ ಬಾಂಧವರಿಗೆ ಶುಭ ಕೋರಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಸಂದೇಶದಲ್ಲಿ ಎಲ್ಲಾ ದೇಶವಾಸಿಗಳಿಗೆ, ವಿಶೇಷವಾಗಿ ಮುಸ್ಲಿಂ ಸಹೋದರ ಮತ್ತು ಸಹೋದರಿಯರಿಗೆ, ಈದ್–ಉಲ್–ಫಿತರ್ ಶುಭಾಶಯಗಳು. ಪವಿತ್ರ ರಂಜಾನ್ ತಿಂಗಳ ನಂತರ ಆಚರಿಸಲಾಗುವ ಈ ಹಬ್ಬ ಚೈತನ್ಯ ಹರಡಲಿದೆ ಎಂದಿದ್ದಾರೆ.

ಜೊತೆಗೆ ಏಕತೆ, ಸೌಹಾರ್ದತೆ ಮತ್ತು ಭ್ರಾತೃತ್ವ, ಸಂತೋಷ ಹಂಚಿಕೊಳ್ಳುವ ಈ ಹಬ್ಬ ಕ್ಷಮೆ ಮತ್ತು ದಾನ ಪ್ರೇರೇಪಿಸುತ್ತದೆ. ಈ ಶುಭ ಸಂದರ್ಭದಲ್ಲಿ, ದೇಶ ಪ್ರಗತಿಯ ಹಾದಿಯಲ್ಲಿ ಮುಂದುವರಿಯಲಿ ಮತ್ತು ಎಲ್ಲಾ ದೇಶವಾಸಿಗಳು ಯಾವಾಗಲೂ ಶಾಂತಿಯಿಂದ ಬದುಕುವ ವಾತಾವರಣ ಸೃಷ್ಟಿಯಾಗಲಿ ಎಂದು ಅವರು ಶುಭ ಹಾರೈಸಿದ್ದಾರೆ.

ಪ್ರಧಾನ ನರೇಂದ್ರ ಮೋದಿ ಅವರು ತಮ್ಮ ಸಂದೇಶದಲ್ಲಿ ಈದ್–ಅಲ್–ಫಿತರ್ ಶುಭಾಶಯ ತಿಳಿಸಿದ್ದಾರೆ. ಈದ್–ಉಲ್–ಫಿತರ್ ಸಂದರ್ಭದಲ್ಲಿ ಸಹಾನುಭೂತಿ, ಒಗ್ಗಟ್ಟಿನ ಮತ್ತು ಶಾಂತಿಯ ಚೈತನ್ಯ ಮತ್ತಷ್ಟು ಹರಡಲಿ. ಎಲ್ಲರೂ ಸಂತೋಷದಿಂದ ಮತ್ತು ಆರೋಗ್ಯದಿಂದ ಬದುಕುವ ವಾತಾವರಣ ಸೃಷ್ಟಿಯಾಗಲಿ ಎಂದಿದ್ದಾರೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಶುಭಾಶಯಗಳನ್ನು ತಿಳಿಸಿದ್ದು





"ಈದ್–ಉಲ್–ಫಿತರ್ ಹಬ್ಬ ಸಮಾಜದಲ್ಲಿ ಸಾಮರಸ್ಯ ಮತ್ತು ಸಹಾನುಭೂತಿಯ ಮನೋಭಾವ ಇನ್ನಷ್ಟು ಬಲಪಡಿಸಲಿ. ಎಲ್ಲರಿಗೂ ಸಂತೋಷ, ಉತ್ತಮ ಆರೋಗ್ಯ ಮತ್ತು ಸಮೃದ್ಧಿ ತರಲಿ ಎಂದು ಶುಭ ಹಾರೈಸಿದ್ದಾರೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ,ಈ ಹಬ್ಬ ಸಂತೋಷ ಮತ್ತು ಸಾಮರಸ್ಯದ ಸಂದೇಶ ನೀಡುತ್ತದೆ. ಸಾಮಾಜಿಕ ಐಕ್ಯತೆ ಬಲಪಡಿಸುವುದಲ್ಲದೆ ಪರಸ್ಪರ ಸಹೋದರತ್ವದ ಭಾವನೆ ಹೆಚ್ಚಿಸುತ್ತದೆ. ಹಬ್ಬ ಶಾಂತಿ ಮತ್ತು ಸೌಹಾರ್ದತೆಯ ಸಂದೇಶ ನೀಡಲಿದೆ ಎಂದಿದ್ದಾರೆ.

## ಶೇ.100ರಷ್ಟು ಮತದಾನದ ಗುರಿ: ಸಿಇಓ ರಿಶಿ ಆನಂದ




ವಿಜಯಪುರ : ಜಿಲ್ಲೆಯಲ್ಲಿ ಶೇ.100ರಷ್ಟು ಮತದಾನ ಚಲಾಯಿಸುವ ಗುರಿಯನ್ನು ಹೊಂದಲಾಗಿದೆ. ಮತದಾನ ಮಾಡುವಂತೆ ಜಾಗೃತಿ ಮೂಡಿಸುವಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇದಕ್ಕೆ ಪೂರಕವಾಗಿ ಎಲ್ಲಾ ಅಧಿಕಾರಿ, ಸಿಬ್ಬಂದಿಗಳು ಸಮನ್ವಯದಿಂದ ಸಹಕರಿಸಿ ಗುರಿ ತಲುಪುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.ಜಿಲ್ಲಾ ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ಲೋಕಸಭಾ ಚುನವಣೆ–2024ರ ಹಿನ್ನೆಲೆಯಲ್ಲಿ ಮತದಾನದ ಜಾಗೃತಿ ಕುರಿತು ಭಿತ್ತಿಪತ್ರಗಳು, ಬ್ಯಾನರ್ ಗಳು, ಪೋಸ್ಟರ್ ಗಳು, ಸರ್ಕಾರಿ ಕಛೇರಿಗಳಲ್ಲಿ ರವಾನೆಯಾಗುವ ಪತ್ರಗಳ ಮೇಲೆ ಮುದ್ರಿಸಲು ಶೀಲುಗಳು ಹಾಗೂ ಇತರೆ ಸಾಮಗ್ರಿಗಳನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸುವುದು ನಮ್ಮೆಲ್ಲರ ಜವಾಬ್ದಾರಿ. ಮತದಾನ ಮಾಡುವ ಮೂಲಕ ನಮ್ಮ ಹಕ್ಕನ್ನು ಚಲಾಯಿಸಿ ಕರ್ತವ್ಯವನ್ನು ನಿಭಾಯಿಸೋಣ. ಹಾಗೆಯೇ ಪ್ರಸ್ತುತ ವರ್ಷ ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ವಿಶೇಷವಾಗಿ ಹಲವಾರು ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಆದ್ದರಿಂದ ಜಿಲ್ಲಾ ಪಂಚಾಯತಿಯ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ಮತದಾನ ಜಾಗೃತಿ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು. ಇದೇ ವೇಳೆ ಜಿಲ್ಲಾ ಸ್ವೀಪ್ ಸಮಿತಿಯ ನೊಡೆಲ್ ಅಧಿಕಾರಿಗಳಾದ ಸಿ. ಆರ್ ಮುಂಡರಗಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಳಿಕ ಜಿ.ಪಂ ನ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು "ಚುನಾವಣಾ ಪರ್ವ ದೇಶದ ಗರ್ವ", "ಮತದಾನ ನಮ್ಮೆಲ್ಲರ ಹಕ್ಕು", "ಮತದಾನ ಮಾಡಿದವನೇ ಮಹಾಶೂರ", "ಮಾಡಿ ಮಾಡಿ ಮೇ 7ರಂದು ಮತದಾನ ಮಾಡಿ", "ನಾನು ಖಚಿತವಾಗಿ ಮತದಾನ ಮಾಡುವೆ" ಎಂಬ ಘೋಷಣೆಗಳನ್ನು ಕೂಗಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳಾದ ನಿಂಗಪ್ಪ ಗೋಠೆ, ಉಪ ಕಾರ್ಯದರ್ಶಿಗಳಾದ ಬಿ. ಎಸ್.ಮೂಗನೂರಮಠ, ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಜಿಲ್ಲಾ ಪಂಚಾಯತಿಯ ಎಲ್ಲ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ಉಪಸ್ಥಿತರಿದ್ದರು.

## ಬಂಡಾಯ ಅಭ್ಯರ್ಥಿಯಾಗಿ ಈಶ್ವರಪ್ಪ ಕಣಕ್ಕೆ

ಶಿವಮೊಗ್ಗ, ಏ. 11– ತಮ್ಮ ಪುತ್ರನಗೆ ಟಿಕೆಟ್ ಸಿಗದೆ ಹತಾಶರಾಗಿರುವ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ನಾಳೆ ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಬಂಡಾಯ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಲಿದ್ದಾರೆ.



ನಗರದಲ್ಲಿಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು ನಾಳೆ ಬೆಳಿಗ್ಗೆ 10 ಗಂಟೆಗೆ ಮೆರವಣಿಗೆ ನಡೆಸಿ ಉಮೇದುವಾರಿಕೆ ಸಲ್ಲಿಸುವುದಾಗಿ ಹೇಳಿದರು.

ಸಾಮಾನ್ಯ ಕಾರ್ಯಕರ್ತ ಮತದಾರರೇ ತಮಗೆ ಸ್ಟಾರ್ ಪ್ರಚಾರಕರು. ಬಿಜೆಪಿ ಶುದ್ಧೀಕರಣ ಆಗಬೇಕಾಗಿದ್ದು, ಅದಕ್ಕಾಗಿಯೇ ಹೊರಗೆ ಹೋರಾಟ ಮಾಡುತ್ತಿದ್ದೇನೆ ಎಂದರು. ಶಿವಮೊಗ್ಗ ಲೋಕಸಭಾ ಕ್ಷೇತ್ರಗಳ ಪ್ರವಾಸ ಪೂರ್ಣಗೊಳಿಸಿದ್ದೇನೆ. ಅತಿ ಹೆಚ್ಚು ಬಿಜೆಪಿ ಕಾರ್ಯಕರ್ತರು ಪಕ್ಷೇತರರಾಗಿ ಸ್ಪರ್ಧಿಸುತ್ತಿರುವ ಹಿಂದುತ್ವವಾದಿಯಾಗಿರುವ ತಮಗೆ ಬೆಂಬಲ ನೀಡುತ್ತಿದ್ದಾರೆ ಎಂದರು. ಕಾಂಗ್ರೆಸ್ ಕಾರ್ಯಕರ್ತರು ನೇರವಾಗಿ ತಮಗೆ ಬೆಂಬಲ ನೀಡುತ್ತಿದ್ದಾರೆ. ಕಾಂಗ್ರೆಸ್, ಜೆಡಿಎಸ್ ಕೂಡ ಬೆಂಬಲ ನೀಡುತ್ತಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ದುರ್ಬಲರಾಗಿದ್ದಾರೆ. ಅದಕ್ಕಾಗಿ ತಮಗೆ ಬೆಂಬಲ ಕೊಡುವುದಾಗಿ ಹೇಳುತ್ತಿದ್ದಾರೆ. ನಾಳೆ ಎಲ್ಲರೂ ನಾಮಪತ್ರ ಸಲ್ಲಿಸುವ ವೇಳೆ ಬರುತ್ತಿದ್ದಾರೆ. ಆದರೆ ಇಷ್ಟೊಂದು ಬೆಂಬಲ ಸಿಗುತ್ತದೆ ಎಂದು ನಿರೀಕ್ಷೆ ಮಾಡಿರಲಿಲ್ಲ ಎಂದು ಹೇಳಿದರು. ತಮ್ಮ ಅಭಿಮಾನಗಳು ನಿರೀಕ್ಷೆ ಮೀರಿ ಕೆಲಸ ಮಾಡುತ್ತಿದ್ದಾರೆ. ಸೋಲಿನ ಭಯದಲ್ಲಿ ಅಪ್ರಚಾರ ಮಾಡಲಾಗುತ್ತಿದೆ. ಆದರೆ ಅಪ್ರಚಾರಕ್ಕೆ ಕಾರ್ಯಕರ್ತರು ಕಿವಿಗೊಡಬಾರದು. ತಾವು ಚುನಾವಣೆಯಲ್ಲಿ ಸ್ಪರ್ಧಿಸುವುದು ಖಚಿತ. ಇದರಲ್ಲಿ ಯಾವುದೇ ಅನುಮಾನ ಬೇಡ. ತಮ್ಮ ವಿರುದ್ಧ ವ್ಯವಸ್ಥವಾಗಿ ಚುನಾವಣಾ ಪ್ರಚಾರ ನಡೆಯುತ್ತಿದೆ ಎಂದು ಬಿಜೆಪಿ ನಾಯಕರ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದರು.

ದಲಿತರು, ಹಿಂದುಳಿದವರು ತಮಗೆ ಬೆಂಬಲ ನೀಡಲು ಮುಂದಾಗಿದ್ದಾರೆ. ಮುಂದುವರೆದ ಜನಾಂಗದವರು ಬೆಂಬಲ ಕೊಡುತ್ತಿದ್ದಾರೆ. ಪ್ರಖರ ಹಿಂದುತ್ವವಾದಿಗಳಿಗೆ ಟಿಕೆಟ್ ನೀಡಲ್ಲ ಎಂಬ ಆರೋಪ ಕೇಳಿ ಬಂದಿದೆ. ಸಿ.ಟಿ. ರವಿ, ಪ್ರತಾಪ್ ಸಿಂಹ ರಾಜಕೀಯ ಪಕ್ಷದಲ್ಲಿದ್ದು, ಅವರು ಬಿಜೆಪಿಯಲ್ಲಿ ಇದ್ದುಕೊಂಡು ಏನು ಮಾಡಬೇಕೋ ಅದನ್ನು ಮಾಡುತ್ತಾರೆ.

ಬಿಜೆಪಿ ವಿರುದ್ಧ ಆಕ್ರೋಶ

ಚುನಾವಣಾ ಪ್ರಚಾರದ ವೇಳೆ ಪ್ರಧಾನ ಮೋದಿಯವರ ಭಾವಚಿತ್ರ ಬಳಸದಂತೆ ಹೇಳಲು ಇವರು ಯಾರು ಎಂದು ಬಿಜೆಪಿ ನಾಯಕರ ವಿರುದ್ಧ ಈಶ್ವರಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಮಗೆ ಫೋಟೋ ಬಳಸದಂತೆ ಹೇಳುತ್ತಿದ್ದಾರೆ. ಬಿಜೆಪಿಯವರು ಮೋದಿಯವರ ಫೋಟೋ ಬಿಟ್ಟು ಚುನಾವಣೆ ನಡೆಸಲಿ ಎಂದು ತಿರುಗೇಟು ನೀಡಿದರು.

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ರಾಘವೇಂದ್ರ, ವಿಜಯೇಂದ್ರ ಫೋಟೋ ಇಟ್ಟುಕೊಂಡು ಚುನಾವಣೆ ನಡೆಸಲಿ. ತಮಗೆ ನರೇಂದ್ರ ಮೋದಿ ಫೋಟೋ ಹಾಕದಂತೆ ಬಿಜೆಪಿ ನಾಯಕರು ಹೇಳುತ್ತಿರುವುದಕ್ಕೆ ಕಿಡಿಕಾಡಿದರು. ನ್ಯಾಯಾಲಯ ಮತ್ತು ಚುನಾವಣಾ ಆಯೋಗ ಏನು ತೀರ್ಮಾನ ಕೈಗೊಳ್ಳುತ್ತದೆ ನೋಡೋಣ ಎಂದರು. ತಾವು ಚುನಾವಣೆಗೆ ಸ್ಪರ್ಧಿಸುವುದಾಗಿ ಹೇಳುತ್ತಿದ್ದರೂ ಇದುವರೆಗೂ ತಮ್ಮನ್ನು ಪಕ್ಷದಿಂದ ಉಚ್ಚಾಟನೆ ಮಾಡಿಲ್ಲ ತಾವು ಉಚ್ಚಾಟನೆ ಮಾಡುವುದನ್ನೇ ಕಾಯುತ್ತಿದ್ದೇನೆ ಎಂದರು.

### ಸಾರ್ವತ್ರಿಕ ಲೋಕಸಭಾ ಚುನಾವಣೆ–2024

## ಕರಪತ್ರ, ಪೋಸ್ಟರ್‌ಗಳ ಮೇಲೆ ಮುದ್ರಕರ, ಪ್ರಕಾಶಕರ ಹೆಸರು, ವಿಳಾಸ ಕಡ್ಡಾಯ

ಕೊಪ್ಪಳ ಏಪ್ರಿಲ್ 11 : ಸಾರ್ವತ್ರಿಕ ಲೋಕಸಭಾ ಚುನಾವಣೆಯ ಅಂಗವಾಗಿ ಅಭ್ಯರ್ಥಿಗಳ ಪ್ರಚಾರಕ್ಕೆ ಮುದ್ರಿಸುವ ಕರಪತ್ರ, ಪೋಸ್ಟರ್‌ಗಳಲ್ಲಿ ಜನತಾ ಪ್ರಾತಿನಿಧ್ಯ ಕಾಯ್ದೆ 1951 ರ ಸೆಕ್ಷನ್ 127ಎ ಅನ್ವಯ ಮುದ್ರಕರ ಹೆಸರು, ವಿಳಾಸ ಹಾಗೂ ಮುದ್ರಣಗಳ ಪ್ರತಿಗಳ ಸಂಖ್ಯೆಯನ್ನು ಕಡ್ಡಾಯವಾಗಿ ಮುದ್ರಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.

ಚುನಾವಣಾ ಆಯೋಗದ ನಿರ್ದೇಶನದಂತೆ ಮುದ್ರಿತ ಪ್ರಚಾರ ಸಾಮಗ್ರಿಗಳಲ್ಲಿ ಮುದ್ರಕರ ಹಾಗೂ ಪ್ರಕಾಶಕರ ಗುರುತನ್ನು ಬಹಿರಂಗ ಪಡಿಸುವುದು ಕಡ್ಡಾಯ ಹಾಗೂ ಅವರು ಪ್ರಕಟಿಸಿದ ಕರಪತ್ರ, ಪೋಸ್ಟರ್ ಮುಂತಾದ ಮುದ್ರಿತ ಪ್ರಚಾರ ಸಾಮಗ್ರಿಗಳಲ್ಲಿನ ವಿಷಯಗಳಿಗೆ ಮುದ್ರಕರು ಹಾಗೂ ಪ್ರಕಾಶಕರು ಜವಾಬ್ದಾರರಾಗಿರುತ್ತಾರೆ.ಆರ್‌ಪಿ ಕಾಯಿದೆ 1951 ರ ಸೆಕ್ಷನ್ 127ಎ ಪ್ರಕಾರ ಚುನಾವಣಾ (2 ನೇ ಪುಟಕ್ಕೆ)